## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ವೆಂಕಟೇಶಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುಮಕೂರು ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸುವ ಕುರಿತು ಆದೇಶ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆಯ: ಗ್ರಾಅಪ 198 ವಿಸೇಬಿ 2013 ದಿ.2.12.2013
2. ಸರ್ಕಾರದ ಕಾರಣ ಕೇಳುವ ಸಂಖ್ಯೆ: ಗ್ರಾಅಪ 198 ವಿಸೇಬಿ 2013. ದಿನಾಂಕ: 09-09-2014

-------

ಪ್ರಸ್ತಾವನೆ:

ಶ್ರೀ ವೆಂಕಟೇಶಯ್ಯ, ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುಮಕೂರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ನಿರ್ಮಲ ಭಾರತ ಅಭಿಯಾನ ಆಂದೋಲನಾ ಕಾರ್ಯಕ್ರಮದಡಿಯಲ್ಲಿ ಶೌಚಾಲಯಗಳನ್ನು ನಿರ್ಮಿಸಿಕೊಂಡಿರುವ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲು ಗ್ರಾಮಪಂಚಾಯಿತಿಗಳಿಂದ ಶಿಫಾರಸ್ಸು ಮಾಡಿದರೂ ಹಾಗೂ ಈ ಕಛೇರಿಯಿಂದ ಅನುದಾನವನ್ನು ಬಿಡುಗಡೆ ಮಾಡಿದ್ದರೂ ಸಹಾ ಹಲವಾರು ಗ್ರಾಮ ಪಂಚಾಯಿತಿಗಳಲ್ಲಿ ಅರ್ಹ ಫಲಾನುಭವಿಗಳಿಗೆ ಹಣವನ್ನು ಬಿಡುಗಡೆ ಮಾಡದೇ ವಂಚಿಸಲಾಗಿದ್ದು, ತಾಲ್ಲೂಕಿನಲ್ಲಿ ಸುಮಾರು ರೂ.1.23 ಕೋಟಿಗಳನ್ನು ಹಲವಾರು ತಿಂಗಳುಗಳಿಂದ ಫಲಾನುಭವಿಗಳಿಗೆ ವಿತರಿಸದೆ ದುರುದ್ದೇಶ ಪೂರ್ವಕವಾಗಿ ಹಾಗೂ ಫಲಾನುಭವಿಗಳಿಗೆ ಕಿರುಕುಳ ನೀಡುವ ಮೂಲಕ ಯೋಜನೆಯ ಹಿನ್ನೆಡೆಗೆ ಕಾರಣರಾಗಿರುವುದು, ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು, ಇವರು ಪ್ರತಿ ತಿಂಗಳೂ ಕನಿಷ್ಟ 10 ಗ್ರಾಮ ಪಂಚಾಯಿತಿಗಳನ್ನು ತಪಾಸಣೆ ನಡೆಸಿ ವರದಿ ಸಲ್ಲಿಸಲು ಸೂಚಿಸಿದ್ದರೂ, ಹಾಗೂ ಇ-ಎನ್‌ಎಂಆರ್‌ಗಳನ್ನು ತೆಗೆಯುವುದರ ಮುಖಾಂತರ ಯೋಜನೆಯುನ್ನು ವ್ಯವಸ್ಥಿತ ರೀತಿಯಲ್ಲಿ ಅನುಷ್ಠಾನ ಮಾಡಲು ಹಲವಾರು ಸಲಹೆ ಸೂಚನೆಗಳನ್ನು ನೀಡಿದ್ದರೂ ಸಹ ಅದನ್ನು ಪಾಲಿಸದೇ ಕರ್ತವ್ಯ ಲೋಪವೆಸಗಿ, ಮೇಲಾಧಿಕಾರಿಗಳು ನೀಡುವ ಸೂಚನೆಗೆ ಅಗೌರವ ಸಲ್ಲಿಸುವ ಪ್ರವೃತ್ತಿಯನ್ನು ಹೊಂದಿದ್ದು, ಯೋಜನೆಯ ಅನುಷ್ಠಾನದಲ್ಲಿ ಹಿನ್ನಡೆಗೆ ಕಾರಣರಾಗಿರುವುದು. ತೋಟಗಾರಿಕಾ ಇಲಾಖೆಯಿಂದ ವೈಯುಕ್ತಿಕ ಫಲಾನುಭವಿಗಳ ತೋಟಗಳಲ್ಲಿ ತೋಟಗಾರಿಕಾ ಸಸ್ಯ ಕ್ಷೇತ್ರಗಳನ್ನು ಬೆಳೆಸಲು ರೈತರು ಕಾರ್ಯಕ್ರಮವಹಿಸಿದ್ದರೂ ಸಹ ಅಂತಹ ಫಲಾನುಭವಿಗಳಿಗೆ ಇ-ಎನ್‌ಎಂಆರ್‌ಗಳನ್ನು ತೆಗೆಯದೇ ಯೋಜನೆಯ ಬಗ್ಗೆ ಸಾರ್ವಜನಿಕರು ವಿಮುಖರಾಗಲು ಕಾರಣವಾಗಿರುವುದು. ಈ ಮೂಲಕ ಸರ್ಕಾರದ ಸೂಚನೆ ಹಾಗೂ ಸರ್ಕಾರದ ಆಶಯಕ್ಕೆ ವಿರುದ್ಧವಾಗಿ ವರ್ತಿಸಿ, ಯೋಜನೆಯಲ್ಲಿ ಫಲ ಪಡೆಯಲು ಉದ್ದೇಶಿಸಿರುವ ರೈತರಿಗೆ ವಂಚಿಸಿದ್ದು, ಈ ವಿಷಯವನ್ನು ಇವರ ಗಮನಕ್ಕೆ ತಂದರೂ ಇವರು ತಪ್ಪಿತಸ್ಥ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಕಾರ್ಯದರ್ಶಿಗಳ ಮೇಲೆ ಶಿಸ್ತು ಕ್ರಮವಹಿಸದೇ/ ಪರಿಶೀಲಿಸದೇ ಅವರೊಂದಿಗೆ ಶಾಮೀಲಾಗಿ ಯೋಜನೆಯ ಹಿನ್ನೆಡೆಗೆ ಕಾರಣರಾಗಿರುವುದು ಇತ್ಯಾದಿ ಕರ್ತವ್ಯಲೋಪ ಮತ್ತು ಹಣ ದುರುಪಯೋಗ ಪಡಿಸಿಕೊಂಡ ಆರೋಪಗಳಿಗೆ ಸಂಬಂಧಿಸಿದಂತೆ ಸದರಿ ಅಧಿಕಾರಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಇಲಾಖಾ ವಿಚಾರಣೆ ಬಾಕಿ ಇಟ್ಟು ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ವೆಂಕಟೇಶಯ್ಯ, ಇವರ ದುರ್ನಡತೆ/ ಕರ್ತವ್ಯಲೋಪ ವೆಸಗಿರುವ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಡಿಯಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು (ಅನುಬಂಧ 1 ರಿಂದ 4ನ್ನು) ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿಯು ಈವರೆಗೆ ಲಿಖಿತ ಹೇಳಿಕೆಯನ್ನು ಸಲ್ಲಿಸದೇ ಇರುವುದರಿಂದ ಅವರ ಹೇಳಿಕೆಗಳು ಏನೂ ಇಲ್ಲವೆಂದು ಪರಿಗಣಿಸಿ ಸದರಿ ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆಯನ್ನು ಜರುಗಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 198 ವಿಸೇಬಿ 2013 ಬೆಂಗಳೂರು ದಿನಾಂಕ:08-04-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ವೆಂಕಟೇಶಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತುಮಕೂರು ಇವರ ವಿರುದ್ಧ ಮಾಡಲಾದ ಆರೋಪಗಳ

ಸತ್ಯಾಸತ್ಯತೆಯನ್ನು ತಿಳಿಯಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11(5)(ಸಿ) ರ ಪ್ರಕಾರ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ತುಮಕೂರು ಇವರನ್ನು ಶಿಸ್ತು ಪ್ರಾಧಿಕಾರದ ಪರವಾಗಿ ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/6/ ಸೇಇವಿ/2010 ದಿನಾಂಕ: 28-04-2011 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ&ಸಿ)(ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ)/ತುಮಕೂರು
3. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ. 1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ತುಮಕೂರು( ಮಂಡನಾಧಿಕಾರಿ).
5. ಆಪಾದಿತ ಅಧಿಕಾರಿ/ನೌಕರರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಇವರ ಮುಖಾಂತರ)

ಪ್ರತಿಯನ್ನು:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO